ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ ಇಡಿ/ಕೆಇಎ/ಕೆಸೆಟ್/2023-24 ದಿನಾಂಕ: 21.01.2025

## ಪ್ರಕಟಣೆ

ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ-2024 (ಕೆಸೆಟ್-2024) ರಲ್ಲಿ ಅರ್ಹರಾದ ಎಲ್ಲಾ 41 ವಿಷಯಗಳ ಅಭ್ಯರ್ಥಿಗಳಿಗೆ ದಿನಾಂಕ 13.01.2025 ರಿಂದ ದಿನಾಂಕ 20.01.2025 ರ ವರೆಗೆ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವಂತೆ ತಿಳಿಸಲಾಗಿತ್ತು. ಆದರೆ ಕೆಲವು ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಗೈರು ಹಾಜರಾಗಿರುವುದು ಕಂಡುಬಂದಿರುತ್ತದೆ.

ಆದ್ದರಿಂದ ದಿನಾಂಕ 13.01.2025 ರಿಂದ 20.01.2025 ರವರೆಗೆ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾದ ಕೆಸೆಟ್-2024 ತಾತ್ಕಾಲಿಕ ಅರ್ಹ ಅಭ್ಯರ್ಥಿಗಳ ಪಟ್ಟಿಯಲ್ಲಿನ ಗೈರುಹಾಜರಾದ ಅಭ್ಯರ್ಥಿಗಳು ಮತ್ತು ಸ್ನಾತಕೋತ್ತರ ಪದವಿ ಪೂರ್ಣಗೊಂಡು ಫಲಿತಾಂಶ ಘೋಷಣೆಗೊಂಡಿರುವ ಅರ್ಹ ಅಭ್ಯರ್ಥಿಗಳು ಮಾತ್ರ **ದಿನಾಂಕ 31.01.2025 ರಂದು ಬೆಳಿಗ್ಗೆ 10.00 ಕ್ಕೆ** ಎಲ್ಲಾ ಮೂಲ ದಾಖಲೆಗಳೊಂದಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗತಕ್ಕದ್ದು.

ಶೈಕ್ಷಣಿಕ ಅರ್ಹತೆ ಮತ್ತು ಮೀಸಲಾತಿ ಸಂಬಂಧಿಸಿದ ಎಲ್ಲಾ ನಿಬಂಧನೆಗಳು ಹಾಗೂ ಮೂಲ ದಾಖಲೆಗಳ ಪರಿಶೀಲನೆಗೆ ಸಲ್ಲಿಸಬೇಕಾದ ದಾಖಲಾತಿ ಪ್ರಮಾಣ ಪತ್ರಗಳ ವಿವರಗಳಿಗೆ ದಿನಾಂಕ 13.07.2024 ರ ಅಧಿಸೂಚನೆಯನ್ನು ಮತ್ತು ದಿನಾಂಕ 09.01.2025 ರ ಮಾರ್ಗಸೂಚಿಯನ್ನು ಓದಿಕೊಳ್ಳಲು ಸೂಚಿಸಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಪ್ರವರ್ಗದ ಅಭ್ಯರ್ಥಿಗಳು ಹಾಗೂ ವಿಶೇಷ ಚೇತನ ಮತ್ತಿತರ ಮೀಸಲಾತಿಗೆ ಸಂಬಂಧಿಸಿದ ಅಭ್ಯರ್ಥಿಗಳು ತಮ್ಮ ಮೀಸಲಾತಿಗೆ ಸಂಬಂಧಿಸಿದಂತೆ ನಿಗದಿತ ನಮೂನೆಯಲ್ಲಿ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ಪ್ರವರ್ಗದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

ವಿವಾಹಿತ ಮಹಿಳಾ ಅಭ್ಯರ್ಥಿಗಳು (ಕೆಸೆಟ್-2024ರ ಅರ್ಜಿಯಲ್ಲಿ ವಿವಾಹಿತರೆಂದು ನಮೂದಿಸಿ 2ಎ, 2ಬಿ, 3ಎ, 3ಬಿ ಮೀಸಲಾತಿ ಕೋರಿರುವ ಮಹಿಳಾ ಅಭ್ಯರ್ಥಿಗಳು) ತಮ್ಮ ಪತಿಯ ಹೆಸರಿನೊಂದಿಗೆ ಜಾರಿಯಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಮೂಲ ದಾಖಲೆಗಳ ಪರಿಶೀಲನೆ ಸಮಯದಲ್ಲಿ ಸಲ್ಲಿಸಲು ಸೂಚಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು

**ಸೂಚನೆ:** 1. ವಿವಿಧ ಕಾರಣಗಳಿಂದ ದಿನಾಂಕ **13.01.2025** ರಿಂದ **20.01.2025** ರವರೆಗೆ ದಾಖಲಾತಿ ಪರಿಶೀಲನೆ ಪೂರ್ಣಗೊಳ್ಳದ ಅಭ್ಯರ್ಥಿಗಳು ಅಗತ್ಯ ದಾಖಲೆಗಳು ಈಗ ಲಭ್ಯವಿದ್ದಲ್ಲಿ ಮಾತ್ರ ದಿನಾಂಕ **31.01.2025** ರಂದು ದಾಖಲಾತಿ ಪರಿಶೀಲನೆಗೆ ಹಾಜರಾಗತಕ್ಕದ್ದು.

2. ಅರ್ಹತಾ ಪಟ್ಟಿಯಲ್ಲಿ ಹೆಸರಿರುವ ಆದರೆ, ಸ್ನಾತಕೋತ್ತರ ಪದವಿ ಪೂರ್ಣಗೊಳ್ಳದ / ಎಲ್ಲಾ ವರ್ಷಗಳ / ಎಲ್ಲಾ ಸೆಮಿಸ್ಟರ್‌ಗಳ ಅಂಕಪಟ್ಟಿ ಇಲ್ಲದಿರುವ ಅಭ್ಯರ್ಥಿಗಳು ಮೂಲ ದಾಖಲಾತಿ ಪರಿಶೀಲನೆಗೆ ಹಾಜರಾಗುವ ಅಗತ್ಯತೆ ಇರುವುದಿಲ್ಲ. ಸದರಿ ಅಭ್ಯರ್ಥಿಗಳು ಸ್ನಾತಕೋತ್ತರ ಪದವಿ ಪೂರ್ಣಗೊಂಡ ನಂತರ ಎಲ್ಲಾ ವರ್ಷಗಳ / ಎಲ್ಲಾ ಸೆಮಿಸ್ಟರ್‌ಗಳ ಅಂಕ ಪಟ್ಟಿಗಳೊಂದಿಗೆ ಮೂಲ ದಾಖಲಾತಿ ಪರಿಶೀಲನೆಗೆ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಸೂಚಿಸಲ್ಪಡುವ ಮುಂಬರುವ ದಿನಾಂಕಗಳಂದು ಹಾಜರಾಗತಕ್ಕದ್ದು.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in